No. 1790/2022

**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಚೇರಿ, ಬೀದರ**

**ಅಧಿಸೂಚನೆ ಸಂಖ್ಯೆ 248/2022, ದಿನಾಂಕ: 13/06/2022**

ವಿಷಯ: ಖಾಲಿ ಇರುವ ಬೆರಳಚ್ಚು–ನಕಲುಗಾರರು, ಆದೇಶ ಜಾರಿಕಾರರು ಮತ್ತು ಜವಾನರು ಹುದ್ದೆಗಳ ನೇರ ನೇಮಕಾತಿ ಕುರಿತು.

ಉಲ್ಲೇಖ:
1. ಮಾನ್ಯ ಉಚ್ಚ ನ್ಯಾಯಾಲಯ ಪತ್ರ ಸಂಖ್ಯೆ ಎಲ್.ಸಿ.ಎ II 128/2012 ದಿನಾಂಕ: 27/01/2022
2. ಮಾನ್ಯ ಉಚ್ಚ ನ್ಯಾಯಾಲಯ ಪತ್ರ ಗಳ ಸಂಖ್ಯೆ ಎಲ್.ಸಿ.ಎ-II 128/2012 ದಿನಾಂಕ: 18/09/2018 ಮತ್ತು 21/12/2019
3. ಸರಕಾರದ ಆದೇಶ ಸಂಖ್ಯೆ ಲಾ 166 ಎಲ್.ಎ.ಸಿ 2015 ದಿನಾಂಕ 06/03/2021 ವೃಂದ ಮತ್ತು ನೇಮಕಾತಿ ನಿಯಮಗಳು 2021
4. ಈ ಕಚೇರಿ ಟಿಪ್ಪಣಿ ದಿನಾಂಕ: 13/06/2022 ಮತ್ತು ಅದರಂತೆ ಆದೇಶ.

***

---

ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಸಲ್ಲಿಸಲು ಆರಂಭ ದಿನಾಂಕ: **13/06/2022** ಹಾಗು ಕೊನೆಯ ದಿನಾಂಕ: **12/07/2022,** ಸಮಯ: ರಾತ್ರಿ **11.59** ಗಂಟೆಯವರೆಗೆ

ಭಾರತೀಯ ಸ್ಟೇಟ್ ಬ್ಯಾಂಕ್ ಚಲನ್ ಮುಖಾಂತರ ಶುಲ್ಕ ಪಾವತಿಸಲು ಕಡೆಯ ದಿನಾಂಕ: **14/07/2022**

---

ಈ ಮೂಲಕ, ಬೀದರ ಜಿಲ್ಲೆಯ ವಿವಿಧ ನ್ಯಾಯಾಲಯಗಳಲ್ಲಿ ಖಾಲಿ ಇರುವ ಬೆರಳಚ್ಚು ನಕಲುಗಾರರು, ಆದೇಶ ಜಾರಿಕಾರರು ಹಾಗು ಜವಾನರು ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಅಹ್ವಾನಿಸಲಾಗಿದೆ. ಅಭ್ಯರ್ಥಿಗಳು ಅರ್ಜಿಯನ್ನು ಬೀದರ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ಅಧಿಕೃತ ವೆಬ್‌ಸೈಟ್ https://districts.ecourts.gov.in/bidar-onlinerecruitment ನಲ್ಲಿ ನೀಡಲಾದ ಲಿಂಕ್ ಮೂಲಕ ಆನ್‌ಲೈನ್‌ನಲ್ಲಿ ದಿನಾಂಕ: **13/06/2022** ರಿಂದ ದಿನಾಂಕ: **12/07/2022** ರ ರಾತ್ರಿ **11.59** ಗಂಟೆಯವರೆಗೆ ಮಾತ್ರ ಸಲ್ಲಿಸತಕ್ಕದ್ದು

ಆನ್‌ಲೈನ್ ಹೊರತುಪಡಿಸಿ, ಖುದ್ದಾಗಿ, ಅಂಚೆ ಮೂಲಕ ಅಥವಾ ಇತರೆ ಯಾವುದೇ ರೀತಿಯಲ್ಲಿ ಸಲ್ಲಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

## 1. ಬೆರಳಚ್ಚು ನಕಲುಗಾರರು (**Typist Copyist**) ಒಟ್ಟು ಹುದ್ದೆಗಳು: **03**

**ವೇತನ ಶ್ರೇಣಿ** : 21400-500-22400-550-24600-600-27000-650-29600-750-32600-850-36000-950-39800-1100-42000 **ಹಾಗು ವಿಶೇಷ ಭತ್ಯೆ**

ಸ್ಥಳೀಯ ವೃಂದ ಅಂದರೆ **371 (ಜೆ)** ಅಡಿಯಲ್ಲಿ ಖಾಲಿ ಇರುವ ಹುದ್ದೆಗಳು **: 02**

| ಹುದ್ದೆಗಳ ವರ್ಗೀಕರಣ | ಇತರೆ | ಗ್ರಾಮೀಣ | ಒಟ್ಟು |
|---|---|---|---|
| ಸಾಮಾನ್ಯ ಅಭ್ಯರ್ಥಿ | – | 1 | **1** |
| ಪ್ರವರ್ಗ-**III** ಎ | 1 | – | **1** |
| ಒಟ್ಟು | **1** | **1** | **2** |

ಉಳಿಕೆ ಮೂಲ ವೃಂದದಲ್ಲಿ ಖಾಲಿ ಇರುವ ಹುದ್ದೆಗಳು **: 01**

| ಹುದ್ದೆಗಳ ವರ್ಗೀಕರಣ | ಇತರೆ | ಒಟ್ಟು |
|---|---|---|
| ಪ್ರವರ್ಗ-**II** ಬಿ | 1 | **1** |
| ಒಟ್ಟು | **1** | **1** |

## ಬೆರಳಚ್ಚು ನಕಲುಗಾರರು ಹುದ್ದೆಯ ವಿದ್ಯಾರ್ಹತೆ:

1. ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕಡೆಯ ದಿನಾಂಕದ ಒಳಗಾಗಿ ಅಭ್ಯರ್ಥಿಗಳು ದ್ವಿತೀಯ ಪಿ.ಯು.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು.

2. ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಕನ್ನಡ ಮತ್ತು ಇಂಗ್ಲಿಷ್ ಎರಡೂ ಭಾಷೆಗಳಲ್ಲಿ ಕಿರಿಯ ಶ್ರೇಣಿ ಬೆರಳಚ್ಚು ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

## ಬೆರಳಚ್ಚು ನಕಲುಗಾರರು ಹುದ್ದೆಯ ಆಯ್ಕೆಯ ವಿಧಾನ:

1. ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳು) (ನೇಮಕಾತಿ) ನಿಯಮ 1982 ಮತ್ತು (ತಿದ್ದುಪಡಿ) ನಿಯಮ 2007 ಹಾಗು ಕಾಲಕಾಲಕ್ಕೆ ಆದ ತಿದ್ದುಪಡಿ ನಿಯಮಗಳ ಪ್ರಕಾರ ನೇಮಕಾತಿಯನ್ನು ನಡೆಸಲಾಗುವುದು.

2. ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು 15 ನಿಮಿಷಗಳ ಉಕ್ತಲೇಖನದಲ್ಲಿ ಕೊಡುವ ವಿಷಯವನ್ನು **ಬೆರಳಚ್ಚು ಯಂತ್ರ/ಕಂಪ್ಯೂಟರ್ ಮುಖಾಂತರ** ಬೆರಳಚ್ಚು ಮಾಡುವ ಸಾಮರ್ಥ್ಯ/**ಅರ್ಹತಾ** ಪರೀಕ್ಷೆಯಲ್ಲಿ ಗಳಿಸುವ ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

**ಟಿಪ್ಪಣಿ :**

ಸಾಮರ್ಥ್ಯ/**ಅರ್ಹತಾ** ಪರೀಕ್ಷೆಯು **ಗರಿಷ್ಠ** 100 ಅಂಕಗಳನ್ನು ಒಳಗೊಂಡಿದ್ದು ಅದರಲ್ಲಿ ತೇರ್ಗಡೆಯಾಗಲು ಕನಿಷ್ಠ 50 ಅಂಕಗಳನ್ನು ಪಡೆಯಬೇಕು ಮತ್ತು ಸಂದರ್ಶನವು 05 ಅಂಕಗಳನ್ನೊಳಗೊಂಡಿರುತ್ತದೆ.

## 2. ಆದೇಶ ಜಾರಿಕಾರರು (Process Server): ಒಟ್ಟು ಹುದ್ದೆಗಳ ಸಂಖ್ಯೆ : 14

ವೇತನ ಶ್ರೇಣಿ : 19950–450–20400–500–22400–550–24600–600–27000–650–29600–750–32600–850–36000–950–37900 **ಹಾಗು ಇತರೆ ಭತ್ಯೆಗಳು**

**ಸ್ಥಳೀಯ ವೃಂದ ಅಂದರೆ 371 (ಜೆ) ಅಡಿಯಲ್ಲಿ ಖಾಲಿ ಇರುವ ಹುದ್ದೆಗಳು: 13**

| ಹುದ್ದೆಗಳ ವರ್ಗೀಕರಣ | ಇತರೆ | ಮಹಿಳೆ | ಗ್ರಾಮೀಣ | ಅಂಗವಿಕಲ | ಯೋಜನಾ ನಿರಾಶ್ರಿತರು | ಒಟ್ಟು |
|---|---|---|---|---|---|---|
| ಸಾಮಾನ್ಯ ಅಭ್ಯರ್ಥಿ | 1 | 2 | 1 | 1* | 1 | **6** |
| ಪರಿಶಿಷ್ಟ ಜಾತಿ | 1 | - | 1 | – | – | **2** |
| ಪರಿಶಿಷ್ಟ ಪಂಗಡ | – | 1 | – | – | – | **1** |
| ಪ್ರವರ್ಗ-**II** ಎ | – | – | 1 | – | – | **1** |
| ಪ್ರವರ್ಗ-**II** ಬಿ | – | 1 | – | – | – | **1** |
| ಪ್ರವರ್ಗ-**III** ಎ | – | 1 | – | – | – | **1** |
| ಪ್ರವರ್ಗ-**III** ಬಿ | – | 1 | – | – | – | **1** |
| ಒಟ್ಟು | **2** | **6** | **3** | **1** | **1** | **13** |

* ಮೆದುಳಿನ ಪಾರ್ಶ್ವವಾಯು, ಕುಷ್ಠರೋಗ ನಿವಾರಿತ ವ್ಯಕ್ತಿಗಳು, ಕುಬ್ಜತೆ, ಆಸಿಡ್ ದಾಳಿಗೆ ತುತ್ತಾದವರು ಮತ್ತು ಬಹುವಿಧ ಸ್ನಾಯು ಸವೆತ ಒಳಗೊಂಡಂತೆ ಚಲನವಲನ ವೈಕಲ್ಯತೆ ಉಳ್ಳವರಿಗೆ ಮೀಸಲಿರಿಸಲಾಗಿದೆ. (ಸರಕಾರದ ಆದೇಶ ಸಂಖ್ಯೆಸಿ.ಆ.ಸು.ಇ. 149 ಎಸ್.ಆರ್.ಆರ್. 2020 ದಿನಾಂಕ: 25/09/2020)

**ಉಳಿಕೆ ಮೂಲ ವೃಂದದಲ್ಲಿ ಖಾಲಿ ಇರುವ ಹುದ್ದೆಗಳು : 01**

| ಹುದ್ದೆಗಳ ವರ್ಗೀಕರಣ | ಮಹಿಳೆ | ಒಟ್ಟು |
|---|---|---|
| ಸಾಮಾನ್ಯ ಅಭ್ಯರ್ಥಿ | 1 | **1** |
| ಒಟ್ಟು | **1** | **1** |

**ಆದೇಶ ಜಾರಿಕಾರರು ಹುದ್ದೆಯ ಶೈಕ್ಷಣಿಕ ವಿದ್ಯಾರ್ಹತೆ:**

ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು. ವಾಹನ ಚಾಲನಾ ಪರವಾನಿಗೆ ಇರುವ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

**ಆದೇಶ ಜಾರಿಕಾರರು ಹುದ್ದೆಯ ಆಯ್ಕೆಯ ವಿಧಾನ:**

ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ ಆಧಾರದ ಮೇಲೆ 01 ಹುದ್ದೆಗೆ 25 (**ಅನುಪಾತ** 1:25) ಅಭ್ಯರ್ಥಿಗಳಂತೆ ಅತಿ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳನ್ನು ಪ್ರಕಟಿಸಿರುವ ಹುದ್ದೆಗಳಿಗೆ ಅನುಗುಣವಾಗಿ ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನದಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

**ಟಿಪ್ಪಣಿ:** ಸಂದರ್ಶನವು 10 ಅಂಕಗಳನ್ನೊಳಗೊಂಡಿರುತ್ತದೆ.

## 3. ಜವಾನರು (Peon) ಒಟ್ಟು ಹುದ್ದೆಗಳ ಸಂಖ್ಯೆ : 15

ವೇತನ ಶ್ರೇಣಿ : 17000–400–18600–450–20400–500–22400–550–24600–600–27000–650–28950 ಹಾಗೂ ಇತರೆ ಭತ್ಯೆಗಳು.

**ಸ್ಥಳೀಯ ವೃಂದ ಅಂದರೆ 371 (ಜೆ) ಅಡಿಯಲ್ಲಿ ಖಾಲಿ ಇರುವ ಹುದ್ದೆಗಳು : 09**

| ಹುದ್ದೆಗಳ ವರ್ಗೀಕರಣ | ಮಹಿಳೆ | ಗ್ರಾಮೀಣ | ಅಂಗವಿಕಲ | ಒಟ್ಟು |
|---|---|---|---|---|
| ಸಾಮಾನ್ಯ ಅಭ್ಯರ್ಥಿ | 1 | 3 | 1* | **5** |
| ಪರಿಶಿಷ್ಟ ಜಾತಿ | 1 | 1 | – | **2** |
| ಪ್ರವರ್ಗ-**II** ಎ | 1 | – | – | **1** |
| ಪ್ರವರ್ಗ-**III** ಎ | 1 | – | – | **1** |
| ಒಟ್ಟು | **4** | **4** | **1** | **9** |

* ಮೆದುಳಿನ ಪಾರ್ಶ್ವವಾಯು, ಕುಷ್ಠರೋಗ ನಿವಾರಿತ ವ್ಯಕ್ತಿಗಳು, ಕುಬ್ಜತೆ, ಆಸಿಡ್ ದಾಳಿಗೆ ತುತ್ತಾದವರು ಮತ್ತು ಬಹುವಿಧ ಸ್ನಾಯು ಸವೆತ ಒಳಗೊಂಡಂತೆ ಚಲನವಲನ ವೈಕಲ್ಯತೆ ಉಳ್ಳವರಿಗೆ ಮೀಸಲಿರಿಸಲಾಗಿದೆ. (ಸರಕಾರದ ಆದೇಶ ಸಂಖ್ಯೆಸಿ.ಆ.ಸು.ಇ. 149 ಎಸ್.ಆರ್.ಆರ್. 2020 ದಿನಾಂಕ: 25/09/2020)

**ಉಳಿಕೆ ಮೂಲ ವೃಂದದಲ್ಲಿ ಖಾಲಿ ಇರುವ ಹುದ್ದೆಗಳು : 06**

| ಹುದ್ದೆಗಳ ವರ್ಗೀಕರಣ | ಇತರೆ | ಮಹಿಳೆ | ಮಾಜಿ ಸೈನಿಕ | ಒಟ್ಟು |
|---|---|---|---|---|
| ಸಾಮಾನ್ಯ ಅಭ್ಯರ್ಥಿ | – | – | 2 | **2** |
| ಪರಿಶಿಷ್ಟ ಜಾತಿ | 1 | – | – | **1** |
| ಪ್ರವರ್ಗ-**I** | 1 | – | – | **1** |
| ಪ್ರವರ್ಗ-**II** ಎ | 1 | 1 | – | **2** |
| ಒಟ್ಟು | **3** | **1** | **2** | **6** |

**ಜವಾನರ ಹುದ್ದೆಯ ಶೈಕ್ಷಣಿಕ ವಿದ್ಯಾರ್ಹತೆ:**

10ನೇ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು. **ಹಾಗು ಕನ್ನಡ ಓದಲು ಮತ್ತು ಬರೆಯಲು ತಿಳಿದಿರಬೇಕು.**

**ಜವಾನರು ಹುದ್ದೆಯ ಆಯ್ಕೆಯ ವಿಧಾನ**

ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ ಆಧಾರದ ಮೇಲೆ 1 **ಹುದ್ದೆಗೆ** 10 ಅಭ್ಯರ್ಥಿಗಳಂತೆ (**ಅನುಪಾತ** 1:10) ಅತಿ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳನ್ನು ಪ್ರಕಟಿಸಿರುವ ಹುದ್ದೆಗಳಿಗೆ ಅನುಗುಣವಾಗಿ ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನದಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

**ಟಿಪ್ಪಣಿ:** ಸಂದರ್ಶನವು 10 ಅಂಕಗಳನ್ನೊಳಗೊಂಡಿರುತ್ತದೆ.

**ವಯೋಮಿತಿ**

ಅರ್ಜಿಗಳನ್ನು **ಸಲ್ಲಿಸಲು** ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು:

ಅ. ಕನಿಷ್ಟ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.
ಆ. ಗರಿಷ್ಟ ವಯೋಮಿತಿ **ಈ ಕೆಳಗಿನ ಕೋಷ್ಟಕದಂತೆ** :

| | |
|---|---|
| ಸಾಮಾನ್ಯ ವರ್ಗ | 35 ವರ್ಷ |
| ಪ್ರವರ್ಗ 2ಎ, 2ಬಿ, 3ಎ, 3ಬಿ | 38 ವರ್ಷ |
| ಪರಿಶಿಷ್ಟ ಜಾತಿ: ಪರಿಶಿಷ್ಟ ಪಂಗಡ: ಪ್ರವರ್ಗ–1 | 40 ವರ್ಷ |

ವಯೋಮಿತಿ ಸಡಿಲಿಕೆ:

ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮ 1977 ರಲ್ಲಿ ನಿರ್ದಿಷ್ಟಪಡಿಸುರುವಂತೆ ಈ ಕೆಳಗಿನ ಸಂದರ್ಭಗಳಲ್ಲಿ ಸದರಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು:

1. ಮಾಜಿ ಸೈನಿಕರಿಗೆ ಗರಿಷ್ಠ ವಯೋಮಿತಿಯಲ್ಲಿ ಅವರು ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸಿರುವಷ್ಟು ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳ ಸಡಿಲಿಕೆ.

2. ವಿಧವೆಯರು, ಜೀತಕಾರ್ಮಿಕರು ಮತ್ತು ಅಂಗವಿಕಲರು ಸಂಬಂಧಿಸಿದ ಪ್ರಾಧಿಕಾರಿಗಳು ನೀಡುವ ಪ್ರಮಾಣ ಪತ್ರ ಹೊಂದಿದ್ದಲ್ಲಿ ವಯೋಮಿತಿಯಲ್ಲಿ ಗರಿಷ್ಠ 10 ವರ್ಷಗಳ ಸಡಿಲಿಕೆ ನೀಡಲಾಗುವುದು. ಜೀತ ಕಾರ್ಮಿಕರು ಎಂದರೆ Bonded Labor System (Abolition) Act 1976 (Central Act 19 of 1976) ಅಥವಾ Karnataka Bonded Labor System (Abolition) Ordinance 1975 ರ ಅಡಿಯಲ್ಲಿ ಮಾಡಲಾದ ನಿಯಮಗಳ ಮೇರೆಗೆ ಜೀತ ಕಾರ್ಮಿಕ ಪದ್ಧತಿಯಿಂದ ಮುಕ್ತನಾದ ವ್ಯಕ್ತಿ.

3. ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ರಾಜ್ಯ ಸರಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ, ಗರಿಷ್ಠ ವಯೋಮಿತಿಯನ್ನು ಅವರು ಎಷ್ಟು ವರ್ಷಗಳ ಅವಧಿಗೆ ಹುದ್ದೆಯಲ್ಲಿ ಸೇವೆ ಸಲ್ಲಿಸುರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳ ಅಥವಾ 10 ವರ್ಷಗಳ ಅವಧಿ ಎರಡರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ಸಡಿಲಿಕೆಯನ್ನು ನೀಡಲಾಗುವುದು.

4. ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸೇವೆ ಸಲ್ಲಿಸಿದ್ದರೆ ಅಷ್ಟು ವರ್ಷಗಳ ಅಥವಾ 05 ವರ್ಷಗಳ ಅವಧಿ, ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

5. ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ಸ್‌ನಲ್ಲಿ ಪೂರ್ಣ ಕಾಲಿಕ ಪರೀಕ್ಷಕನಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕೆಡೆಟ್ ಪರೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು

6. ಅಭ್ಯರ್ಥಿಗಳು ರಾಜ್ಯ ಸರಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಅಂತಹ ಗ್ರಾಮ ಸಮೂಹ ಪರಿಶೀಲಕನಾಗಿ ಸೇವೆ ಸಲ್ಲಿಸಿದ ವರ್ಷಗಳು.

<u>ಶುಲ್ಕ ಸಲ್ಲಿಸುವ ವಿವರ:</u>

| | |
|---|---|
| ಸಾಮಾನ್ಯ ವರ್ಗ, ಪ್ರವರ್ಗ 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳಿಗೆ | ರೂ. 200/- |
| ಪರಿಶಿಷ್ಟ ಜಾತಿ: ಪರಿಶಿಷ್ಟ ಪಂಗಡ : ಪ್ರವರ್ಗ–1 | ರೂ. 100/- |

1. <u>ಆನ್‌ಲೈನ್ ಮೂಲಕ ಶುಲ್ಕ ಸಂದಾಯ:</u> ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ನಂತರ, ನಿಗದಿತ ಶುಲ್ಕವನ್ನು ಈ ನ್ಯಾಯಾಲಯದ ವೆಬ್‌ಸೈಟ್ ವಿಳಾಸ https://districts.ecourts.gov.in/bidar-onlinerecruitment ನಲ್ಲಿ ನೀಡಲಾದ ಲಿಂಕ್ ಮುಖಾಂತರ ಸ್ಟೇಟ್ ಬ್ಯಾಂಕ್ ಇಂಡಿಯಾದ State Bank Collect ಮೂಲಕ Online payment through net banking/Credit card/Debit card/Challan Download ಯಾವುದಾದರು ಒಂದು ಸೌಲಭ್ಯದ ಮೂಲಕ ಪಾವತಿಸತಕ್ಕದ್ದು. ಅಥವಾ

2. <u>ಚಲನ್ ಮೂಲಕ ಶುಲ್ಕ ಸಂದಾಯ:</u> ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ನಂತರ,ಶುಲ್ಕವನ್ನು ಆನ್‌ಲೈನ್ ಮೂಲಕ ಪಾವತಿ ಮಾಡಲು ಇಚ್ಚಿಸದ ಅಭ್ಯರ್ಥಿಗಳು ಚಲನ್ ಪ್ರತಿಯನ್ನು ಅಧಿಕೃತ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಂಡು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಯಾವುದೇ ಶಾಖೆಯಲ್ಲಿ ಶುಲ್ಕವನ್ನು ಪಾವತಿಸಬಹುದು.

ಸೂಚನೆ: ಮೇಲಿನ ವಿಧಾನಗಳನ್ನು ಹೊರತುಪಡಿಸಿ ಯಾವುದೇ ಡಿಡಿ, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಗಳನ್ನು ಸ್ವೀಕರಿಸಲಾಗುವುದಿಲ್ಲ. ಹಾಗು ನಿಗದಿತ ಶುಲ್ಕವನ್ನು ಪಾವತಿಸದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

3. ಅಭ್ಯರ್ಥಿಗಳು ಒಂದು ವೇಳೆ ಅರ್ಜಿ ಸಂಖ್ಯೆಯನ್ನು ತಪ್ಪಾಗಿ/ಹೊಂದಿಕೆಯಾಗದಂತೆ ನಮೂದಿಸಿದಲ್ಲಿ ಅಥವಾ ಯಾವುದೇ ಕಾರಣಕ್ಕೆ ಶುಲ್ಕ ಪಾವತಿಯಾಗದಿದ್ದಲ್ಲಿ ನೇಮಕಾತಿ ಪ್ರಾಧಿಕಾರವು ಹೊಣೆಯಾಗಿರುವುದಿಲ್ಲ ಮತ್ತು ಈ ಕುರಿತು ಯಾವುದೇ ಸಂವಹನಕ್ಕೆ ಅವಕಾಶವಿರುವುದಿಲ್ಲ. ಒಮ್ಮೆ ಪಾವತಿಯಾದಂತಹ ಶುಲ್ಕವನ್ನು ಯಾವುದೇ ಸಂದರ್ಭದಲ್ಲೂ ಹಿಂದಿರುಗಿಸಲಾಗುವುದಿಲ್ಲ.

<u>ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು.</u>

1. ನ್ಯಾಯಾಲದದ ಅಧಿಕೃತ ವೆಬ್‌ಸೈಟನಲ್ಲಿ ಅರ್ಜಿಯನ್ನು ಆನ್‌ಲೈನ್ ಮೂಲಕ ನೊಂದಾಯಿಸಲು ದಿನಾಂಕ: **13/06/2022** ರಿಂದ ದಿನಾಂಕ: **12/07/2022**, ಸಮಯ: ರಾತ್ರಿ **11.59** ಗಂಟೆ ಯವರೆಗೆ ಅವಕಾಶ ವಿರುತ್ತದೆ.

2. ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಹಾಕಲು ಬಯಸುವ ಅಭ್ಯರ್ಥಿಯು ಆಯಾ ಹುದ್ದೆಗಳಿಗೆ ಪ್ರತ್ಯೇಕವಾದ ನಿಗದಿ ಪಡಿಸಿದ ಅರ್ಜಿ ನಮೂನೆಯಲ್ಲಿ ಅರ್ಜಿ ಸಲ್ಲಿಸತಕ್ಕದ್ದು.

3. ಅರ್ಜಿಯಲ್ಲಿ ಸರಿಯಾಗಿ ಮಾಹಿತಿ ನೀಡದೆ ಇರುವ ಮತ್ತು ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

4. ಅಭ್ಯರ್ಥಿಗಳು ತಮ್ಮ ಮೊಬೈಲ್ ಸಂಖ್ಯೆಯನ್ನು ಹಾಗು ಇ-ಮೇಲ್ ಐಡಿಯನ್ನು ಕಡ್ಡಾಯವಾಗಿ ನಮೂದಿಸುವುದು. ಒಂದು ವೇಳೆ ಎಸ್.ಎಮ್.ಎಸ್ ಅಥವಾ ಇ-ಮೇಲ್ ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ನೇಮಕಾತಿ ಪ್ರಾಧಿಕಾರಿಯು ಹೊಣೆಯಾಗುವುದಿಲ್ಲ.

5. ಅರ್ಹ ಅಭ್ಯರ್ಥಿಗಳಿಗೆ ಎಸ್.ಎಮ್.ಎಸ್/ಇ-ಮೇಲ್ ಮುಖಾಂತರ ಮಾಹಿತಿ ನೀಡಲಾಗುವುದು. ಅರ್ಹತಾ ಪರೀಕ್ಷೆಗೆ/ ಸಂದರ್ಶನಕ್ಕೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟನಲ್ಲಿ ಪ್ರಕಟಿಸಲಾಗುವುದು. ಸದರಿ ಪಟ್ಟಿಯ ಆಧಾರದ ಮೇಲೆ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ/ಅರ್ಹತಾ ಪರೀಕ್ಷೆಗೆ ಕರೆಯಲಾಗುವುದು.

6. ಅಭ್ಯರ್ಥಿಯು ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಲು ಈ ಕೆಳಗಿನ ಸೂಚನೆಗಳನ್ನು ಪಾಲಿಸತಕ್ಕದ್ದು.

ಅ. ಇತ್ತೀಚಿನ ಬಣ್ಣದ ಭಾವಚಿತ್ರವನ್ನು 5 ಸೆಂಟಿಮೀಟರ್ ಉದ್ದ X 3.6 ಸೆಂಟಿಮೀಟರ್ ಅಗಲವಿರಬೇಕು. ಮತ್ತು 50 kb ಅಳತೆ ಮೀರಬಾರದು ಹಾಗು .jpg ನಮೂನೆಯಲ್ಲಿರಬೇಕು. ಭಾವಚಿತ್ರದ ಮೇಲೆ ಸಹಿಯನ್ನು ಮಾಡಿರಬಾರದು.

ಆ. ಕಪ್ಪು/ನೀಲಿ ಬಣ್ಣದ ಬಾಲ್‌ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ (2.5 ಸೆಂಟಿಮೀಟರ್ ಉದ್ದ X 7.5 ಅಗಲವಿರಬೇಕು) ಮತ್ತು 26 kb ಅಳತೆ ಮೀರಬಾರದು ಮತ್ತು .jpg ನಮೂನೆಯಲ್ಲಿರಬೇಕು

7. ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನು ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಈ ಅಧಿಸೂಚನೆಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು ನಂತರ ಅರ್ಜಿಯನ್ನು ಹಾಗು ಶುಲ್ಕವನ್ನು ತುಂಬಿದ ಪ್ರತಿಯನ್ನು ಡೌನ್‌ಲೊಡ್ ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಇಟ್ಟುಕೊಳ್ಳಬೇಕು.

8. ಕೊನೆಯ ಘಳಿಗೆಯಲ್ಲಿ ಸರ್ವರ್ ಡೌನ್/ಮಂದಗತಿ ಆಗುವ ಸಾಧ್ಯತೆ ಇರುವುದರಿಂದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೆ ಕಾಯದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು, ಒಮ್ಮೆ ಶುಲ್ಕ ಪಾವತಿಸಿದ ನಂತರ ಯಾವುದೇ ಕಾರಣಕ್ಕೆ ಹಿಂದಿರುಗಸಲಾಗುವುದಿಲ್ಲ.

9. ಸೇವಾ ನಿರತ ಅಭ್ಯರ್ಥಿಗಳು ಸಂಬಂದಪಟ್ಟ ಪ್ರಾಧಿಕಾರದಿಂದ ನೀಡುವ "ನಿರಾಕ್ಷೇಪಣಾ ಪ್ರಮಾಣಪತ್ರ"ವನ್ನು ಪಡೆದುಕೊಂಡಿರತಕ್ಕದ್ದು.

10. ಆನ್‌ಲೈನ್ ಅರ್ಜಿಗಳನ್ನು ಹೊರತುಪಡಿಸಿ ಇತರೆ ಯಾವುದೇ ರೀತಿಯಲ್ಲಿ ಅರ್ಜಿಗಳನ್ನು ಸಲ್ಲಿಸಲು ಅವಕಾಶ ಇರುವುದಿಲ್ಲ.

<u>ಇತರೆ ಸೂಚನೆಗಳು</u>:

11. ಅಭ್ಯರ್ಥಿಗಳು ತಮ್ಮ 10 ನೇ ತರಗತಿಯ ಅಂಕಗಳು ಶ್ರೇಣಿಯಲ್ಲಿದ್ದರೆ (ಸಿ.ಜಿ.ಪಿ.ಎ) ಅದನ್ನು ಪರೀಕ್ಷಾ ಮಂಡಳಿಗಳ ನಿಯಮಗಳಂತೆ ಅಂಕಗಳಾಗಿ ಪರಿವರ್ತಿಸಿ ಗರಿಷ್ಠ ಅಂಕಗಳು, ಪಡೆದ ಅಂಕಗಳು ಮತ್ತು ಒಟ್ಟು ಅಂಕಗಳ ಶೇಕಡಾವಾರನ್ನು ನಿಗದಿತ ಕಾಲಂನಲ್ಲಿ ಕಡ್ಡಾಯವಾಗಿ ನಮೂದಿಸಬೇಕು.

12. ಅರ್ಹತಾ ಪರೀಕ್ಷೆಗೆ / ಸಂದರ್ಶನದ ಸಮಯದಲ್ಲಿ ದಾಖಲೆಗಳ ಪರಿಶೀಲನೆಗಾಗಿ ಕರೆಯಲ್ಪಡುವ ಅಭ್ಯರ್ಥಿಗಳು, ಶೈಕ್ಷಣಿಕ ವಿದ್ಯಾರ್ಹತೆ (ಜನ್ಮ ದಿನಾಂಕವನ್ನು ತೋರಿಸಲು ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ) ಜಾತಿ ಪ್ರಮಾಣ ಪತ್ರ, ಗ್ರಾಮೀಣ, ಮಾಜಿ ಸೈನಿಕರು, ಯೋಜನಾ ನಿರ್ರಾಶ್ರಿತರು, ಅಂಗವಿಕಲ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಕ್ಲೇಮು ಮಾಡುವ ಅಭ್ಯರ್ಥಿಗಳು ಇವುಗಳಿಗೆ ಸಂಬಂಧಿಸಿದಂತೆ ಅಗತ್ಯ ಮೂಲ ದಾಖಲೆಗಳನ್ನು ಪರಿಶೀಲನೆಗಾಗಿ ಸಲ್ಲಿಸತಕ್ಕದ್ದು. ಅರ್ಜಿದಾರರು ಅರ್ಜಿಯಲ್ಲಿ ಸಲ್ಲಿಸಿದ ಮಾಹಿತಿಯು ಹಾಗು ದಾಖಲಾತಿಗಳು ಹೊಂದಾಣಿಕೆ ಆಗದಿದ್ದಲ್ಲಿ ಅಥವಾ ಸುಳ್ಳೆಂದು ಕಂಡು ಬಂದಲ್ಲಿ ಅವರ ಅಭ್ಯರ್ಥಿತನವನ್ನು ರದ್ದುಮಾಡಲಾಗುವುದು ಹಾಗು ಅವರ ವಿರುದ್ಧ ಕಾನೂನು ರೀತ್ಯ ಕ್ರಮ ಜರುಗಿಸಲಾಗುವುದು.

13. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಅಭ್ಯರ್ಥಿಗಳು ನಮೂನೆ 'ಡಿ' ಯಲ್ಲಿ, ಪ್ರವರ್ಗ-1 ಅಭ್ಯರ್ಥಿಗಳು ನಮೂನೆ 'ಇ' ಯಲ್ಲಿ ಮತ್ತು, 2 ಎ, 2 ಬಿ, 3 ಎ ಮತ್ತು 3 ಬಿ ಅಭ್ಯರ್ಥಿಗಳು ನಮೂನೆ 'ಎಫ್' ನಲ್ಲಿ ಸಂಬಂಧಪಟ್ಟ ತಹಸೀಲ್ದಾರಿಂದ ಜಾತಿ ಪ್ರಮಾಣ ಪತ್ರ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಅರ್ಜಿಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದು ಅರ್ಜಿ ಸಲ್ಲಿಸಬೇಕು.

14. ಸ್ಥಳೀಯ ವೃಂದ (ಸಂವಿಧಾನದ 371-(ಜೆ) ಅನುಚ್ಛೇದದಡಿಯಲ್ಲಿ ಹೈದ್ರಾಬಾದ್-ಕರ್ನಾಟಕ ಪ್ರದೇಶದ) ಅಭ್ಯರ್ಥಿಗಳಿಗೆ ಸಂಬಂಧಿಸಿದ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು, ಕರ್ನಾಟಕ ಸರ್ಕಾರಿ ಉದ್ಯೋಗ (ಹೈದ್ರಾಬಾದ್-ಕರ್ನಾಟಕ ಪ್ರದೇಶ ಅರ್ಹತಾ ಪ್ರಮಾಣ ಪತ್ರಗಳು) ನಿಯಮಗಳು 2013 ರಡಿಯಲ್ಲಿ ಗೊತ್ತು ಪಡಿಸಿದಂತೆ ಅರ್ಜಿಯನ್ನು ಸಲ್ಲಿಸಿದ ದಿನಾಂಕದಂದು ಅಥವಾ ಅದಕ್ಕೂ ಮುಂಚಿತವಾಗಿಯೇ ಸಕ್ಷಮ ಪ್ರಾಧಿಕಾರವು ನೀಡುವ ಯುಕ್ತ ಪ್ರಮಾಣ ಪತ್ರವನ್ನು ಹೊಂದಿರತಕ್ಕದ್ದು.

15. ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ಸರಕಾರದ ಅಧಿಕೃತ ಜ್ಞಾಪನಾ ಸಂಖ್ಯೆ ಸಿಆಸುಇ/115/ಸೇನನಿ/2005 ದಿನಾಂಕ 19-11-2005 ರಂತೆ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು

16. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರಕಾರಿ ಆದೇಶ ಸಂಖ್ಯೆ ಸಿ.ಆಸು.ಇ/96/ಸೇನನಿ/2005 ದಿನಾಂಕ 10/08/2005 ರ ಪ್ರಕಾರ ನಿಗದಿತ ನಮೂನೆ–2 ರಲ್ಲಿ ಸಂಬಂದ ಪಟ್ಟ ಪ್ರಾಧಿಕಾರದಿಂದ ಪಡೆದು ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿ ಇಟ್ಟುಕೊಳ್ಳತಕ್ಕದ್ದು, ಗ್ರಾಮೀಣ ಮೀಸಲಾತಿಗೆ ಅರ್ಹತೆ ಪಡೆಯಲು ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರವನ್ನು ಸಲ್ಲಿಸಬೇಕು.

17. ಸಾಮಾನ್ಯ ಅಭ್ಯರ್ಥಿಗಳು ಗ್ರಾಮೀಣ ಮೀಸಲಾತಿ ಪಡೆಯಲು ನಮೂನೆ 2 ಜೊತೆಗೆ ಮೇಲುಸ್ತರಕ್ಕೆ ಸೇರಿಲ್ಲ ಎನ್ನುವ ಪ್ರಮಾಣ ಪತ್ರವನ್ನು /ನಮೂನೆ–1 ಸಲ್ಲಿಸಬೇಕು

18. ಯೋಜನಾ ನಿರಾಶ್ರಿತ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರಕಾರಿ ಆದೇಶ ಸಂಖ್ಯೆ ಸಿಆಸುಇ/44/ಸೇನನಿ/2001 ದಿನಾಂಕ: 27/07/2001 ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಸಂಬಂಧಪಟ್ಟ ತಹಸೀಲ್ದಾರರಿಂದ ಪ್ರಮಾಣ ಪತ್ರವನ್ನು ಸಲ್ಲಿಸಬೇಕು.

19. ಮಾಜಿ ಸೈನಿಕ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸೇವೆಯಿಂದ ಬಿಡುಗಡೆ ಮಾಡಲಾದ ಅಥವಾ ವಿಮುಕ್ತಿಗೊಳಿಸಿದ ಪ್ರಮಾಣಪತ್ರವನ್ನುಹೊಂದಿರತಕ್ಕದ್ದು.

20. ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977 ರ ಪ್ರಕಾರ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಎರಡು ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಅಭ್ಯರ್ಥಿಗಳು ಹುದ್ದಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ ಮತ್ತು ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು ಹಾಗು ಕಂಪ್ಯೂಟರ್ ಸಾಕ್ಷಾರತಾ ಪರೀಕ್ಷೆಗಳಲ್ಲಿ ಸೇವೆಗೆ ಸೇರಿದ ಮೂರು ತಿಂಗಳ ಒಳಗಡೆ ಶೇಕಡಾ 60 ಅಂಕಗಳಿಗೆ ಕಡಿಮೆ ಇಲ್ಲದಂತೆ ಪಡೆದು ಉತ್ತೀರ್ಣರಾಗಬೇಕು.

21. ಎಲ್ಲಾ ಅರ್ಹ ಅಭ್ಯರ್ಥಿಗಳಿಗೂ ಅರ್ಹತಾ ಪರೀಕ್ಷೆ/ಸ್ಕಿಲ್ ಟೆಸ್ಟ್ ನಡೆಸಲಾಗುವುದು (ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಅರ್ಹತಾ ಪರೀಕ್ಷೆಗೆ ಹಾಜರಾಗಬೇಕು). ಯಾವುದೇ ಅಭ್ಯರ್ಥಿಗೆ ಅರ್ಹತಾ ಪರೀಕ್ಷೆ ಬಗ್ಗೆ ಮಾಹಿತಿ ಬರದಿದ್ದರೆ, ಅವರು ಅರ್ಹತಾ ಪರೀಕ್ಷೆಗೆ ಅರ್ಹರಲ್ಲ ಎಂದು ತಿಳಿಯತಕ್ಕದ್ದು ಮತ್ತು ಆ ಬಗ್ಗೆ ಯಾವುದೇ ಪತ್ರ ವ್ಯವಹಾರ ಮಾಡಲಾಗುವುದಿಲ್ಲ.

22. ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಸಂದರ್ಶನಕ್ಕೆ ಹಾಜರಾಗಬೇಕು ಹಾಗು ಸಂದರ್ಶನದ ಕರೆ ಯಾವ ಅಭ್ಯರ್ಥಿಗಳಿಗೆ ಬರುವುದಿಲ್ಲವೋ ಅವರು ಸಂದರ್ಶನಕ್ಕೆ ಅರ್ಹರಾಗಿಲ್ಲ ಎಂದು ಭಾವಿಸತಕ್ಕದ್ದು ಮತ್ತು ಈ ಸಂಬಂಧ ಯಾವುದೇ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

23. ಆಯ್ಕೆಯ ಸಂಬಂಧ ಅನರ್ಹವಾದ ಅಭ್ಯರ್ಥಿಗಳು ಈ ಕಚೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರ ನಡೆಸಲು ಅವಕಾಶ ಇರುವುದಿಲ್ಲ.

24. ನೇಮಕಾತಿಯು ಸಂಪೂರ್ಣ ಪಾರದರ್ಶಕತೆಯಿಂದ ಕೂಡಿದ್ದು ಅಭ್ಯರ್ಥಿಗಳು ಯಾವುದೇ ಮಧ್ಯವರ್ತಿಗಳ ಸಂಪರ್ಕಕ್ಕೆ ಅವಕಾಶ ಇರುವುದಿಲ್ಲ.

25. ಯಾವುದೇ ಅಭ್ಯರ್ಥಿಗಳು ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅನುಸರಿಸುವುದು ಕಂಡು ಬಂದಲ್ಲಿ ಅಂತಹವರ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು ಮತ್ತು ಕಾನೂನು ರೀತ್ಯ ಕ್ರಮ ಕೈಗೊಳ್ಳಲಾಗುವುದು.

13/6/22

ಸ್ಥಳ: ಬೀದರ.
ದಿನಾಂಕ: 13/06/2022

(ಬಸವರಾಜ್ ಎಸ್. ಚೇಗರಡ್ಡಿ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬೀದರ.

13/6

ನಕಲನ್ನು ಗೌರವಗಳೊಂದಿಗೆ ಮಾಹಿತಿಗಾಗಿ:

1) ಮಹಾ ವಿಲೇಖನಾಧಿಕಾರಿಗಳು, ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು, ಇವರಿಗೆ ಮುಖಪತ್ರದೊಂದಿಗೆ.

ಪ್ರಕಟಣೆಯ ನಕಲನ್ನು ಪ್ರಕಟಿಸುವ ಕುರಿತು:

1) ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು: ಬೆಂಗಳೂರು ಗ್ರಾಮೀಣ : ಬಾಗಲಕೋಟೆ: ಬೆಳಗಾವಿ: ಬಳ್ಳಾರಿ: ಚಾಮರಾಜನಗರ: ಚಿಕ್ಕಮಗಳೂರು: ಚಿಕ್ಕಬಳ್ಳಾಪುರ: ಚಿತ್ರದುರ್ಗ: ದಾವಣಗೆರೆ: ಧಾರವಾಡ: ಗದಗ: ಕಲಬುರಗಿ: ಹಾಸನ: ಹಾವೇರಿ: ಕೋಲಾರ: : ಕೊಪ್ಪಳ: ಕೊಡಗು: ಮಡಿಕೇರಿ: ಮಂಡ್ಯ : ಮೈಸೂರು: ಮಂಗಳೂರು: ರಾಯಚೂರು: ರಾಮನಗರ: ಶಿವಮೊಗ್ಗ: ತುಮಕೂರು: ಉಡುಪಿ: ಉತ್ತರ ಕನ್ನಡ : ವಿಜಯಪುರ: ಯಾದಗಿರಿ.
2) ನಿರ್ದೇಶಕರು, ವಾರ್ತಾ, ಪ್ರಚಾರ ಮತ್ತು ಪ್ರವಾಸೋದ್ಯಮ ಇಲಾಖೆ, ಬೆಂಗಳೂರು, ಇವರಿಗೆ ಸಾದಿಲ್ವಾರು ವೆಚ್ಚ ಕೈಪಿಡಿ ನಿಯಮ 55 (ಬಿ) (ಡಿ) ಪ್ರಕಾರ ಹೆಚ್ಚು ಪ್ರಸಾರ ಉಳ್ಳ ಎರಡು ದಿನಪತ್ರಿಕೆಗಳಲ್ಲಿ ಉಚಿತವಾಗಿ ಪ್ರಕಟಿಸಿ ಪ್ರಕಟಣೆಯ 5 ಪ್ರತಿಗಳನ್ನು ಈ ನ್ಯಾಯಾಲಯಕ್ಕೆ ಸಲ್ಲಿಸಲು ಕೋರಲಾಗಿದೆ.
3) ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಬೀದರ.
4) ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ, ಸರ್ಕಾರಿ ಹೊರವಲಯ ಮುದ್ರಣಾಲಯ, ಮೈಸೂರು ರಸ್ತೆ, ಬೆಂಗಳೂರು-- 560 059, ಇವರಿಗೆ ಪ್ರಕಟಣೆಯನ್ನು ಮುಂದಿನ ರಾಜ್ಯಪತ್ರದಲ್ಲಿ ಉಚಿತವಾಗಿ ಪ್ರಕಟಿಸಿ ಪ್ರಕಟಣೆಯ 5 ಪ್ರತಿಗಳನ್ನು ಈ ನ್ಯಾಯಾಲಯಕ್ಕೆ ಸಲ್ಲಿಸಲು ಕೋರಲಾಗಿದೆ.
5) ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ ಅಧಿಕಾರಿಗಳು, ಬೀದರ ವ್ಯಾಪಕ ಪ್ರಚಾರಕ್ಕಾಗಿ

6) ಜಿಲ್ಲಾಧಿಕಾರಿಗಳು, ಬೀದರ ಜಿಲ್ಲೆ, ಬೀದರ.
7) ಜಿಲ್ಲಾ ಪೋಲೀಸ್ ಅಧೀಕ್ಷಕರು, ಬೀದರ ಜಿಲ್ಲೆ, ಬೀದರ.
8) ಜಿಲ್ಲಾ ಖಜಾನಾ ಅಧಿಕಾರಿಗಳು, ಬೀದರ ಜಿಲ್ಲೆ, ಬೀದರ.
9) 2ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೀದರ್, (ಬಸವಕಲ್ಯಾಣ ಪೀಠ)
10) ಪ್ರದಾನ ಕೌಟುಂಬಿಕ ನ್ಯಾಯಾಧೀಶರು, ಬೀದರ.
11) ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು, ಬೀದರ.
12) ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಹುಮನಾಬಾದ: ಬಸವಕಲ್ಯಾಣ: ಭಾಲ್ಕಿ, ಔರಾದ್ ಬಿ.
13) ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಬೀದರ್
14) ಪ್ರಧಾನ /ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಬೀದರ್, ಬಸವಕಲ್ಯಾಣ ಹುಮನಾಬಾದ ಭಾಲ್ಕಿ ಮತು **ಔರಾದ್-ಬಿ.**
15) ಜಿಲ್ಲಾ ನ್ಯಾಯಾಲಯದ ಗಣಕ ವಿಭಾಗಕ್ಕೆ ಜಿಲ್ಲಾ ನ್ಯಾಯಾಲಯದ ಅಂತರ್ಜಾಲದಲ್ಲಿ ಪ್ರಕಟಣೆಗಾಗಿ.
16) ಜಿಲ್ಲಾ ನ್ಯಾಯಾಲಯದ ಸೂಚನಾ ಫಲಕಕ್ಕೆ.
17) ಆಡಳಿತ ವಿಭಾಗದ ಕಡತಕ್ಕೆ.
18) ಕಚೇರಿ ಪ್ರತಿ